ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017-18 ದಿನಾಂಕ: 19-5-2017

# ಪತ್ರಿಕಾ ಆಮಂತ್ರಣ

1. **An Awareness Programme**

**On Intellectual Property Rights for Industry**
**"Driving Patentability and Profits the IPR Way"**

**Chief Guest:**
**Mr. M. Prabhu, Managing Director, VTPC, Govt . of Karnataka**

**Date: 20-05-2017, Saturday Time: 9-30 AM**
**Place: VTPC Training Centre, 3rd Floor, "A" Block, B.M.T.C. Complex, Shanthi Nagar, K.H. Road, Bengaluru – 560 027.**

2. **"Pharma Waste Management – A Challenge"**

**Inauguration by:**

**Sri Justice M.N. Venkatachaliah,**
**Hon'ble Retired Chief Justice of India.**

**Presided by**

**Sri Justice D.V. Shylendra Kumar,**
**Hon'ble Retired Justice of Karnataka**

**Date: 20-05-2017 Saturday, Time : 10.00 AM**
**Place : Multipurpose Hall, 2nd Floor, SDS TRC & RGICD, Bengaluru.**

3. ರಾಜ್ಯದ ಆಹಾರ ಭದ್ರತೆ ಮತ್ತು ಮಣ್ಣು, ಪರಿಸರ ಹವಾಮಾನಗಳಿಗೆ ಹೊಂದಿಕೊಳ್ಳುವ ವಿವಿಧ ಬೆಳೆಗಳ ನಕ್ಷೆ ರಚಿಸುವ ಅಧ್ಯಯನದ ಅಂತಿಮ ಕಾರ್ಯಾಗಾರ:

ಅಧ್ಯಕ್ಷತೆ:

ಡಾ. ಬಿ.ಎನ್. ಪ್ರಕಾಶ್ ಕಮ್ಮರಡಿ, ಕೃಷಿ ಬೆಲೆ ಆಯೋಗದ ಅಧ್ಯಕ್ಷ.

ಡಾ ರಾಜೇಂದ್ರ ಹೆಗ್ಡೆ, ಎನ್‌ಬಿಎಸ್‌ಎಸ್ & ಎಲ್‌ಯುಪಿ ಸಂಸ್ಥೆಯ ಮುಖ್ಯಸ್ಥರು.

ದಿನಾಂಕ: 20–05–2017, ಶನಿವಾರ. ಸಮಯ: ಬೆಳಿಗ್ಗೆ 10.30 ಗಂಟೆಗೆ
ಸ್ಥಳ: ರಾಷ್ಟ್ರೀಯ ಮಣ್ಣು ಸರ್ವೇಕ್ಷಣಾ ಮತ್ತು ಭೂ ಬಳಕೆ ನಿಯೋಜನಾ ಸಂಸ್ಥೆಯ ವಲಯ ಕೇಂದ್ರ (ಎನ್‌ಬಿಎಸ್‌ಎಸ್ ಮತ್ತು ಎಲ್‌ಯುಪಿ), ಹೆಬ್ಬಾಳ, ಬೆಂಗಳೂರು.

4. "ಭಯೋತ್ಪಾದನಾ ವಿರೋಧಿ ದಿನ" ಆಚರಣೆ

ಪ್ರತಿಜ್ಞಾ ವಚನ ಬೋಧನೆ:

ಸಿದ್ದರಾಮಯ್ಯ, ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ.

ದಿನಾಂಕ: 20–05–2017 ಶನಿವಾರ, ಸಮಯ: ಬೆಳಿಗ್ಗೆ 11.00 ಗಂಟೆಗೆ

ಸ್ಥಳ: ಕೊಠಡಿ ಸಂಖ್ಯೆ : 334, ಸಮ್ಮೇಳನ ಸಭಾಂಗಣ, ವಿಧಾನಸೌಧ, ಮೂರನೇ ಮಹಡಿ,

5. ಕನ್ನಡ ಮತ್ತು ಸಂಸ್ಕೃತಿ ಇಲಾಖೆವತಿಯಿಂದ "ಮನೆಯಂಗಳದಲ್ಲಿ ಮಾತುಕತೆ–187" ಕಾರ್ಯಕ್ರಮ:

ತಿಂಗಳ ಅತಿಥಿ:

ಎಸ್. ದಿವಾಕರ್,
ಹಿರಿಯ ಸಾಹಿತಿಗಳು ಮತ್ತು ಕಥೆಗಾರರು

ದಿನಾಂಕ: 20–05–2017, ಶನಿವಾರ ಸಮಯ: ಸಂಜೆ 4.00 ಗಂಟೆಗೆ
ಸ್ಥಳ: ನಯನ ಸಭಾಂಗಣ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು

6. ಕನ್ನಡ ಸಾಹಿತ್ಯ ಪರಿಷತ್ತು ವತಿಯಿಂದ ಡಾ. ರಾಜ್‌ಕುಮಾರ್ ಸಂಸ್ಕೃತಿ ದತ್ತಿ ಪ್ರಶಸ್ತಿ ಪ್ರದಾನ ಸಮಾರಂಭ:

ಪ್ರಶಸ್ತಿ ಪ್ರದಾನ:

ಅಭಿನಯ ಶಾರದೆ ಡಾ. ಜಯಂತಿ, ಖ್ಯಾತ ಚಲನಚಿತ್ರ ತಾರೆ.

ಅಧ್ಯಕ್ಷತೆ:

ಮನು ಬಳಿಗಾರ್, ಅಧ್ಯಕ್ಷರು ಕನ್ನಡ ಸಾಹಿತ್ಯ ಪರಿಷತ್ತು,

ವಿಶೇಷ ಉಪಸ್ಥಿತಿ :

ಪುನೀತ್ ರಾಜ್‌ಕುಮಾರ್, ಖ್ಯಾತ ಚಲನಚಿತ್ರ ನಾಯಕ ನಟರು.

ಪ್ರಶಸ್ತಿ ಪುರಸ್ಕೃತರು :

ಎಸ್.ಕೆ. ಭಗವಾನ್ , ಖ್ಯಾತ ಚಲನಚಿತ್ರ ನಿರ್ದೇಶಕರು,

ಗೌರವ ಉಪಸ್ಥಿತಿ:

ಎಸ್.ಎ. ಚಿನ್ನೇಗೌಡ, ಚಲನಚಿತ್ರ ನಿರ್ಮಾಪಕರು.

ದಿನಾಂಕ: 20-05-2017, ಶನಿವಾರ ಸಮಯ: ಸಂಜೆ 5-30 ಗಂಟೆಗೆ
ಸ್ಥಳ: ಶ್ರೀಕೃಷ್ಣರಾಜ ಪರಿಷನ್ಮಂದಿರ, ಕನ್ನಡ ಸಾಹಿತ್ಯ ಪರಿಷತ್ತು, ಬೆಂಗಳೂರು – 560 018.

## <u>ಪತ್ರಿಕಾ ಪ್ರಕಟಣೆ</u>

## ಮೀಸಲಾತಿ ಶೇ. 70 ರಷ್ಟು ಹೆಚ್ಚಿಸುವ ಬಗ್ಗೆ ಚಿಂತನೆ – ಮುಖ್ಯಮಂತ್ರಿ ಸಿದ್ದರಾಮಯ್ಯ

ಬೆಂಗಳೂರು, ಮೇ 19, (ಕರ್ನಾಟಕ ವಾರ್ತೆ)

ರಾಜ್ಯದಲ್ಲಿ ಕಳೆದ ವರ್ಷ ನಡೆದ ಸಾಮಾಜಿಕ, ಶೈಕ್ಷಣಿಕ ಸಮೀಕ್ಷಾ ವರದಿ ಬಂದ ನಂತರ ಅದರ ಆಧಾರದ ಮೇಲೆ ಈಗಿರುವ ಮೀಸಲಾತಿಯನ್ನು ಶೇ. 50 ರಿಂದ 70 ರಷ್ಟು ಹೆಚ್ಚಿಸುವ ಬಗ್ಗೆ ಚಿಂತನೆ ನಡೆಸಲಾಗುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ಇಂದು ನಗರದ ಬೆಂಗಳೂರು ಪ್ರೆಸ್‌ಕ್ಲಬ್‌ನಲ್ಲಿ ಹಮ್ಮಿಕೊಂಡಿದ್ದ ಮುಖ್ಯಮಂತ್ರಿಗಳ ಜೊತೆ ಮಾಧ್ಯಮದವರ ಸಂವಾದದಲ್ಲಿ ಮಾತನಾಡುತ್ತಿದ್ದ ಅವರು ಸರ್ವರನ್ನೂ ಒಳಗೊಂಡ ಬೆಳವಣಿಗೆ ನಮ್ಮ ಸರ್ಕಾರದ ಉದ್ದೇಶ, ನಮ್ಮ ಸರ್ಕಾರದ ಎಲ್ಲಾ ಅಭಿವೃದ್ಧಿ ಕಾರ್ಯಕ್ರಮಗಳನ್ನು ಅವಲೋಕಿಸಿದರೆ ಹಿಂದಿನ ಸರ್ಕಾರಕ್ಕಿಂತ ಮೂರರಿಂದ ನಾಲ್ಕು ಪಟ್ಟು ಹೆಚ್ಚು ಹಣ ಒದಗಿಸಿದ್ದೇವೆ.

ಆತ್ಮಹತ್ಯೆ ಮಾಡಿಕೊಂಡ ರೈತನ ಕುಟುಂಬಕ್ಕೆ 5.00 ಲಕ್ಷ ರೂ. ಪರಿಹಾರ ಹಾಗೂ ಹೆಂಡತಿಗೆ 2,000/- ರೂ. ತಿಂಗಳ ಪಿಂಚಣಿ ಮತ್ತು ಮಕ್ಕಳಿಗೆ ಉಚಿತ ಶಿಕ್ಷಣದಂತ ಸೌಲಭ್ಯ ನೀಡಿದ ದೇಶದ ಏಕೈಕ ಸರ್ಕಾರ ನಮ್ಮದು. ರಾಜ್ಯದಲ್ಲಿ ಭೀಕರ ಬರ ಇದ್ದರೂ ಹಳ್ಳಿಗಳಲ್ಲಿ ಜನರು ಗುಳೆ ಹೋಗುವುದು ಕಡಿಮೆಯಾಗಿದೆ ಅದಕ್ಕೆ ಅನ್ನಭಾಗ್ಯ ಯೋಜನೆ ಕಾರಣ ಎಂದು ಅವರು ಹೇಳಿದರು.

ಬೆಂಗಳೂರು ನಗರಕ್ಕೆ ಸೇರ್ಪಡೆಯಾದ 110 ಹಳ್ಳಿಗಳಿಗೆ ನೀರು ಹಾಗೂ ಮೂಲ ಸೌಲಭ್ಯ ಒದಗಿಸಲಾಗಿದೆ. ಹಾರೋಹಳ್ಳಿಯಲ್ಲಿ ಮಹಿಳಾ ಉದ್ಯಮಿಗಳಿಗಾಗಿ ಕೈಗಾರಿಕಾ ವಲಯ ಸ್ಥಾಪಿಸಲಾಗಿದೆ. ಈ ನಾಲ್ಕು ವರ್ಷಗಳ ಸರ್ಕಾರದ ಸಾಧನೆಗಳನ್ನು ಹಾಗೂ ಚುನಾವಣಾ ಸಮಯದಲ್ಲಿ ನೀಡಿದ್ದ ಭರವಸೆಗಳನ್ನು ಈಡೇರಿಸಿದ್ದೇವೆ. ನಮ್ಮದು ನುಡಿದಂತೆ ನಡೆದ ಸರ್ಕಾರ ಹಾಗೂ ನಡೆಯುತ್ತೇವೆ ಎಂದರು.

ಸರ್ಕಾರ ಕನ್ನಡ ಮಾಧ್ಯಮ ಶಾಲೆಗಳ ವಿರೋಧಿಯಲ್ಲ ಹಾಗೂ ಇಂಗ್ಲೀಷ್ ಮಾಧ್ಯಮ ಶಾಲೆಗಳಿಗೆ ಅನುಮತಿ ನಿರಾಕರಿಸುವಂತಿಲ್ಲ ಎಂದು ಸುಪ್ರೀಂ ಕೋರ್ಟ್ ನೀಡಿರುವ ತೀರ್ಪನ್ನು ನಿರಾಕರಿಸುವಂತಿಲ್ಲ. ಮಕ್ಕಳಿಗೆ ಯಾವ ಮಾಧ್ಯಮದಲ್ಲಿ ಶಿಕ್ಷಣ ನೀಡಬೇಕು ಎಂಬುದು ಹೆತ್ತವರ ಆಯ್ಕೆಗೆ ಬಿಟ್ಟಿದ್ದು ಎಂದು ಪತ್ರಕರ್ತರ ಪ್ರಶ್ನೆಯೊಂದಕ್ಕೆ ಮುಖ್ಯಮಂತ್ರಿಗಳು ಉತ್ತರಿಸಿದರು.

ಸಂವಾದದಲ್ಲಿ ಮಾಧ್ಯಮದವರು ಕೇಳಿದ ಹಲವು ಪ್ರಶ್ನೆಗಳಿಗೆ ಮುಖ್ಯಮಂತ್ರಿಯವರು ಉತ್ತರಿಸಿದರು. ಪ್ರೆಸ್‌ಕ್ಲಬ್‌ನ ಅಧ್ಯಕ್ಷ ಸದಾಶಿವ ಶಣೈ ಹಾಗೂ ಇತರ ಪದಾಧಿಕಾರಿಗಳು ಸೇರಿದಂತೆ ಹಲವು ಪತ್ರಕರ್ತರ ಒಕ್ಕೂಟದ ಸದಸ್ಯರು ಭಾಗವಹಿಸಿದ್ದರು.

## ಕನ್ನಡ ಭಾಷೆಯಲ್ಲಿ ನ್ಯಾಯಾಲಯ ತೀರ್ಪಿನಿಂದ ಕಕ್ಷಿದಾರರಿಗೆ ಅನುಕೂಲ – ಮುಖ್ಯಮಂತ್ರಿ ಸಿದ್ದರಾಮಯ್ಯ

ಬೆಂಗಳೂರು, ಮೇ 19, (ಕರ್ನಾಟಕ ವಾರ್ತೆ)

ರಾಜ್ಯದ ಅಧೀನ ನ್ಯಾಯಾಲಯಗಳಲ್ಲಿ ಈ ನೆಲದ ಭಾಷೆಯಾದ ಕನ್ನಡದಲ್ಲಿ ವಾದ ಮಾಡುವುದು ಹಾಗೂ ಕನ್ನಡದಲ್ಲಿ ತೀರ್ಪು ನೀಡುವುದರಿಂದ ಕಕ್ಷಿದಾರರಿಗೆ ಅನುಕೂಲವಾಗಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರವು ಏರ್ಪಡಿಸಿದ್ದ 2015-16 ಹಾಗೂ 2016-17 ನೇ ಸಾಲಿನಲ್ಲಿ ಕನ್ನಡದಲ್ಲಿ ತೀರ್ಪು ನೀಡಿದ 69

ನ್ಯಾಯಾಧೀಶರಿಗೆ ಮತ್ತು ಕನ್ನಡದಲ್ಲಿ ಪ್ರತಿವಾದ ಮಂಡಿಸಿದ 19 ಮಂದಿ ಸರ್ಕಾರಿ ಅಭಿಯೋಜಕರಿಗೆ ಗೌರವ ಸಮರ್ಪಣೆ ಮಾಡಿ ಮಾತನಾಡಿದ ಮುಖ್ಯಮಂತ್ರಿಯವರು ಕನ್ನಡದಲ್ಲಿ ತೀರ್ಪು ನೀಡುವ ನ್ಯಾಯಾಧೀಶರು ಹಾಗೂ ಸರ್ಕಾರಿ ಅಭಿಯೋಜಕರ ಜೊತೆಗೆ ಮುಂದಿನ ವರ್ಷದಿಂದ ಕನ್ನಡದಲ್ಲಿ ವಾದ ಮಂಡಿಸುವ ವಕೀಲರನ್ನು ಗುರುತಿಸಿ ಕನ್ನಡ ಅಭಿವೃದ್ಧಿ ಪ್ರಾಧಿಕಾರ ಅವರಿಗೂ ಗೌರವಿಸುವಂತೆ  ಸೂಚನೆ ನೀಡಿದರು.

ಕನ್ನಡ ಭಾಷೆ ಬಹು ಸುಂದರ ಭಾಷೆ.  ಈ ಭಾಷೆಗೆ ಸುಮಾರು 2000 ವರ್ಷ ಇತಿಹಾಸವಿದ್ದು ಶಾಸ್ತ್ರೀಯ ಭಾಷೆಯ ಸ್ಥಾನಮಾನ ಕೂಡಾ ಸಿಕ್ಕಿದೆ ಎಂದು ತಿಳಿಸಿದ ಮುಖ್ಯಮಂತ್ರಿ ನ್ಯಾಯಾ ಬಯಸಿ ಬರುವ ಕಕ್ಷಿದಾರರಿಗೆ ನ್ಯಾಯದಾನ ಮಾಡುವಂತಹ ಪ್ರಮುಖ ಪಾತ್ರ ನ್ಯಾಯಾಧೀಶರದಾಗಿದೆ ಎಂದರು.

ಕನ್ನಡದಲ್ಲಿ ತೀರ್ಪು ನೀಡಲು ನ್ಯಾಯಾಲಯಗಳಿಗೆ ಹಲವು ತೊಂದರೆಗಳಿದ್ದು ಅಂತಹ ತೊಂದರೆಗಳನ್ನು ಕನ್ನಡ ಅಭಿವೃದ್ಧಿ ಪ್ರಾಧಿಕಾರ ಗುರುತಿಸಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದಲ್ಲಿ ಸರ್ಕಾರವು ಎಲ್ಲಾ ರೀತಿಯ ನೆರವು ನೀಡಲಿದೆ.  ಈ ನೆಲದ ಜನಸಾಮಾನ್ಯರು ಮಾತನಾಡುವ ಕನ್ನಡದಲ್ಲಿ ತೀರ್ಪು ಬಂದಲ್ಲಿ ತೀರ್ಪಿನ ಸಾಧಕಬಾಧಕಗಳ ಬಗ್ಗೆ ಕಕ್ಷಿದಾರರು ಚಿಂತನೆ ನಡೆಸಲು ಅನುಕೂಲವಾಗಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು  ಅಭಿಪ್ರಾಯಪಟ್ಟರು.

ಬಹುತೇಕ ಪ್ರಕರಣಗಳು ಕೆಳಹಂತದ ನ್ಯಾಯಾಲಯಗಳಲ್ಲೇ ಇತ್ಯರ್ಥ್ಯವಾಗುವುದರಿಂದ ಕನ್ನಡದಲ್ಲೇ ತೀರ್ಪುಗಳು ಬಂದಲ್ಲಿ ಜನಸಾಮಾನ್ಯರಿಗೆ ತೀರ್ಪಿನ ಬಗ್ಗೆ ಮನದಟ್ಟು ಆಗುತ್ತದೆ ಎಂದು ಕಾನೂನು ಸಚಿವ ಟಿ.ಬಿ. ಜಯಚಂದ್ರ ಅವರು ತಿಳಿಸಿದರು.

ಕಳೆದ ಕೆಲವು ವರ್ಷಗಳಿಂದ ಬಹುತೇಕ ತೀರ್ಪುಗಳು ಕನ್ನಡದಲ್ಲೇ ಬರುತ್ತಿವೆ.  ಇದು ಸ್ವಾಗತಾರ್ಹ ಬೆಳವಣಿಗೆ ಎಂದು ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಉಚ್ಛ ನ್ಯಾಯಾಲಯದ ನ್ಯಾಯಮೂರ್ತಿ ಎ.ಎಸ್. ಬೋಪಣ್ಣ ಅವರು ಮಾತನಾಡಿ ನ್ಯಾಯಾಲಗಳಲ್ಲಿ ತರ್ಜುಮೆದಾರರ ಅಗತ್ಯತೆ ಇದೆ ಎಂದರು.

ಅಧೀನ ನ್ಯಾಯಾಲಯಗಳಲ್ಲಿ ಕನ್ನಡದ ಅನುಷ್ಠಾನ ಎಷ್ಟು ಮುಖ್ಯವೋ ರಾಜ್ಯ ಉಚ್ಛ ನ್ಯಾಯಾಲಯದಲ್ಲಿ ಕನ್ನಡದ ಅನುಷ್ಠಾನ ಅಷ್ಟೇ ಮುಖ್ಯ ಎಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪ್ರೊ. ಎಸ್.ಜಿ. ಸಿದ್ಧರಾಮಯ್ಯ ತಮ್ಮ ಪ್ರಾಸ್ತಾವಿಕ ನುಡಿಯಲ್ಲಿ ತಿಳಿಸಿದರು.

ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಡಾ. ಮುರುಳೀಧರ್, ರಾಜ್ಯ ಉಚ್ಚ ನ್ಯಾಯಾಲಯದ ನ್ಯಾಯಾಧೀಶರು, ಪ್ರಶಸ್ತಿ ಪುರಸ್ಕೃತ ನ್ಯಾಯಾಧೀಶರು ಸಮಾರಂಭದಲ್ಲಿ ಉಪಸ್ಥಿತರಿದ್ದರು.

ಎಸ್‌ಎಂಳಕೆಪಿಪಿ:ಜಿಪಿಆರ್

## ಡಾ. ರಾಜ್‌ಕುಮಾರ್ ಸಂಸ್ಕೃತಿ ದತ್ತಿ ಪ್ರಶಸ್ತಿ ಪ್ರದಾನ

**ಬೆಂಗಳೂರು, ಮೇ 19, (ಕರ್ನಾಟಕ ವಾರ್ತೆ)**

ಕನ್ನಡ ಸಾಹಿತ್ಯ ಪರಿಷತ್ತು ವತಿಯಿಂದ ಮೇ 20 ರ ಶನಿವಾರದಂದು ಸಂಜೆ 5.30 ಗಂಟೆಗೆ ನಗರದ ಚಾಮರಾಜಪೇಟೆಯಲ್ಲಿರುವ ಕನ್ನಡ ಸಾಹಿತ್ಯ ಪರಿಷತ್‌ನ ಶ್ರೀಕೃಷ್ಣರಾಜ ಪರಿಷನ್ಮಂದಿರದಲ್ಲಿ ಡಾ. ರಾಜ್‌ಕುಮಾರ್ ಸಂಸ್ಕೃತಿ ದತ್ತಿ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಹಮ್ಮಿಕೊಂಡಿದೆ.

ಖ್ಯಾತ ಚಲನಚಿತ್ರ ತಾರೆ ಅಭಿನಯ ಶಾರದೆ ಡಾ. ಜಯಂತಿ ಅವರು ಪ್ರಶಸ್ತಿ ಪ್ರದಾನವನ್ನು ಮಾಡಲಿದ್ದಾರೆ.

ಸಮಾರಂಭ ಅಧ್ಯಕ್ಷತೆಯನ್ನು ಕನ್ನಡ ಸಾಹಿತ್ಯ ಪರಿಷತ್ತು ಅಧ್ಯಕ್ಷ ಡಾ. ಮನು ಬಳಿಗಾರ್ ಅವರು ವಹಿಸಲಿದ್ದಾರೆ.

ಖ್ಯಾತ ಚಲನಚಿತ್ರ ನಾಯಕ ನಟ ಪುನೀತ್ ರಾಜ್‌ಕುಮಾರ್ ಅವರು ವಿಶೇಷ ಅತಿಥಿಯಾಗಿ ಉಪಸ್ಥಿತರಿರುವರು. ಖ್ಯಾತ ಚಲನಚಿತ್ರ ನಿರ್ದೇಶಕ ಹಾಗೂ ಪ್ರಶಸ್ತಿ ಪುರಸ್ಕೃತ ಎಸ್. ಕೆ. ಭಗವಾನ್ ಹಾಗೂ ಚಲನಚಿತ್ರ ನಿರ್ಮಾಪಕ ಎಸ್. ಎ. ಚಿನ್ನೇಗೌಡ ಅವರು ಗೌರವ ಉಪಸ್ಥಿತರಾಗಿ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ.

ಅಂದು ಸಂಜೆ 4.30 ಗಂಟೆಗೆ ಡಾ. ಶಿವರಾಜ ಬ್ಯಾಡರಹಳ್ಳಿ ತಂಡದವರಿಂದ ಗೀತ ಗಾಯನ ಕಾರ್ಯಕ್ರಮವನ್ನು ಸಹ ಹಮ್ಮಿಕೊಂಡಿದೆ.

ಎಸ್‌ಎಂ:ಜೆಡಿ:ಜಿಪಿಆರ್

## ಒಂದು ದಿನದ ಉಚಿತ ತರಬೇತಿ

**ಬೆಂಗಳೂರು, ಮೇ 19, (ಕರ್ನಾಟಕ ವಾರ್ತೆ)**

ಮೈಸೂರು ತೋಟಗಾರಿಕಾ ಸಂಘವು ಎಳೆ ತೆಂಗಿನ ಗರಿಯಿಂದ ತಯಾರಿಸುವ "ಜನೂರ್" ಅಲಂಕಾರಿಕ ಕುರಿತಂತೆ ಒಂದು ದಿನದ ಉಚಿತ ತರಬೇತಿಯನ್ನು ಲಾಲ್‌ಬಾಗ್‌ನಲ್ಲಿ ಹಮ್ಮಿಕೊಂಡಿದೆ.

ಈ ತರಬೇತಿಯನ್ನು ಶ್ರೀಮತಿ ಗೀತಾ ಸೋಮಶೇಖರ್ ಹಾಗೂ ಶ್ರೀಮತಿ ಭಾರ್ಗವಿ ಸತ್ಯನ್ ಅವರು ಮೇ 20 ರಂದು ಮಧ್ಯಾಹ್ನ 2.00 ರಿಂದ 5.00 ಗಂಟೆವರೆಗೆ ಲಾಲ್‌ಬಾಗ್‌ನ ಡಾ. ಎಂ. ಎಚ್. ಮರೀಗೌಡ ಮೆಮೋರಿಯಲ್ ಹಾಲ್‌ನಲ್ಲಿ ನಡೆಸಿಕೊಡಲಿದ್ದಾರೆ.

ಆಸಕ್ತರು ಹೆಚ್ಚಿನ ಮಾಹಿತಿಗಾಗಿ ಕಾರ್ಯದರ್ಶಿಗಳು, ಮೈಸೂರು ತೋಟಗಾರಿಕಾ ಸಂಘ, ಲಾಲ್‌ಬಾಗ್, ಬೆಂಗಳೂರು – 4 (ದೂರವಾಣಿ 26576781 ಅಥವಾ ಮೊಬೈಲ್ ಸಂಖ್ಯೆ 9845803474) ಮೂಲಕ ಸಂಪರ್ಕಿಸಬಹುದಾಗಿದೆ.

ಎಸ್‌ಎಂ:ಜೆಡಿ:ಜಿಪಿಆರ್.

## ಮೇ 20 ರಂದು "ಭಯೋತ್ಪಾದನಾ ವಿರೋದಿ ದಿನ" ಆಚರಣೆ

**ಬೆಂಗಳೂರು, ಮೇ 19, (ಕರ್ನಾಟಕ ವಾರ್ತೆ)**

ಪ್ರತಿವರ್ಷ ಮೇ 21 ಅನ್ನು "ಭಯೋತ್ಪಾದನಾ ವಿರೋಧಿ ದಿನ" ಎಂದು ಆಚರಿಸಲಾಗುತ್ತಿದೆ. ಈ ವರ್ಷ ಮೇ 21 ಭಾನುವಾರ ಸಾರ್ವತ್ರಿಕ ರಜಾ ದಿನವಾಗಿರುವುದರಿಂದ ಮೇ 20 ರಂದು "ಭಯೋತ್ಪಾದನಾ ವಿರೋಧಿ ದಿನ" ಆಚರಣೆ ಮಾಡಲಾಗುವುದು.

ಅದರ ಪ್ರಯುಕ್ತ 20 ರಂದು ವಿಧಾನಸೌಧದ ಮೂರನೇ ಮಹಡಿಯಲ್ಲಿರುವ ಕೊಠಡಿ ಸಂಖ್ಯೆ 334, ಸಮ್ಮೇಳನ ಸಭಾಂಗಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು "ಭಯೋತ್ಪಾದನಾ ವಿರೋಧಿ ದಿನದ" ಪ್ರತಿಜ್ಞಾವಚನವನ್ನು ಬೋಧಿಸಲಿದ್ದಾರೆ.

ಈ ಹಿನ್ನೆಲೆಯಲ್ಲಿ ಮೇ 20 ರಂದು ಬೆಳಿಗ್ಗೆ 10.40 ಗಂಟೆಗೆ ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಅಧಿಕಾರಿಗಳು ಹಾಗೂ ನೌಕರರು ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ತಪ್ಪದೆ ಹಾಜರಾಗಬೇಕೆಂದು ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ರಾಜಕೀಯ) ಇವರು ಪ್ರಕಟಣೆಯಲ್ಲಿ ಕೋರಿದ್ದಾರೆ.

ಎಸ್‌ಎಂ:ಜೆಡಿ:ಜಿಪಿಆರ್

## ಕಬ್ಬನ್‌ಪಾರ್ಕ್‌ನಲ್ಲಿ ಈ ಭಾನುವಾರ

**ಬೆಂಗಳೂರು, ಮೇ 20 (ಕರ್ನಾಟಕ ವಾರ್ತೆ)**

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. **ದಿನಾಂಕ: 21-05-2017ರ** ಭಾನುವಾರದಂದು

ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1) ಬೆಳಿಗ್ಗೆ 06.00 ಗಂಟೆಯಿಂದ ಬೆಳಿಗ್ಗೆ 07.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ **ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಉದಯರಾಗ"** ಎಂಬ ಶೀರ್ಷಿಕೆಯಡಿ **ಶ್ರೀ.ಶರಣಬಸಪ್ಪ ಮತ್ತು ತಂಡದವರಿಂದ ಜಾನಪದ ಗೀತೆ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

2) ಸಂಜೆ 05.00 ಗಂಟೆಯಿಂದ ಸಂಜೆ 06.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ **ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಸಂಧ್ಯಾರಾಗ"** ಎಂಬ ಶೀರ್ಷಿಕೆಯಡಿ **ಶ್ರೀ.ಸಿದ್ದೇಶ್ ಮತ್ತು ತಂಡ, ಕೃಷ್ಣಾಪುರ, ಚನ್ನಪಟ್ಟಣ ರವರಿಂದ ಜಾನಪದ ಗೀತೆ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

3) ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ **ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.

4) ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ **ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ** ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

**ಈ ಭಾನುವಾರದ ವಿಶೇಷ ಕಾರ್ಯಕ್ರಮಗಳು:**

**I.ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ**

- ಬೆಳಿಗ್ಗೆ 7.00 ಗಂಟೆಯಿಂದ 8.00 ಗಂಟೆಯವರೆಗೆ **ಯೂನಿವರ್ಸ್ ಆರ್ಟ್ ಫೌಂಡೇಶನ್** ಸಂಸ್ಥೆಯ ಸಹಯೋಗದೊಂದಿಗೆ **ಮಹಿಮಾ ಹರೀಶ್** ರವರಿಂದ **ಭರತನಾಟ್ಯ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
- ಬೆಳಿಗ್ಗೆ 8.00 ಗಂಟೆಯಿಂದ 9.00 ಗಂಟೆಯವರೆಗೆ **ಶ್ರೀವಾಣಿ ವಿದ್ಯಾ ಕೇಂದ್ರ , ಬಸವೇಶ್ವರ ನಗರ, ಬೆಂಗಳೂರು ಶಾಲಾ ವಿದ್ಯಾರ್ಥಿಗಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.

**II.ಸ್ಥಳ: ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಹತ್ತಿರ**

- **ಬೆಳಿಗ್ಗೆ 6.00 ರಿಂದ ಸಂಜೆ 6.00 ಗಂಟೆಯವರೆಗೆ ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಗಮ ನಿಯಮಿತ ರವರ ವತಿಯಿಂದ ಎನರ್ಜಿ ಎಫಿಶಿಯೆನ್ಸಿ ಸರ್ವಿಸಸ್ ಲಿಮಿಟೆಡ್ (EESL) ರವರ ಸಹಯೋಗದೊಂದಿಗೆ 9 ವ್ಯಾಟ್ LED ಪ್ರತಿ ಬಲ್ಬ್ ಗೆ ರೂ.65/- ರಂತೆ ಮತ್ತು 20 ವ್ಯಾಟ್ LED ಟ್ಯೂಬ್ ಲೈಟ್ ಗೆ ರೂ. 230/- ರಂತೆ ಸಾರ್ವಜನಿಕರಿಗೆ ವಿತರಿಸಲಾಗುವುದು. ಸಾರ್ವಜನಿಕರು ಇತ್ತೀಚಿನ**

ವಿದ್ಯುತ್ ಬಿಲ್ ಪ್ರತಿ, ವಿಳಾಸದ ಚೀಟಿ ಹಾಗೂ ಗುರುತಿನ ಚೀಟಿಯೊಂದಿಗೆ ಪೂರ್ಣ ಮುಂಗಡ ಪಾವತಿ ಮಾಡಿ ಬಲ್ಬ್ ಗಳನ್ನು ಪಡೆಯಬಹುದಾಗಿದೆ.